ಹಾಸನ ಡಿಸ್ಟ್ರಿಕ್ಟ್.

ತಾರೀಖು 17ನೆ ಡಿಸೆಂಬರ್ 1907 ನೆ ಸ

ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡಿದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮಪ್ರಕಾರ ಜಪ್ತಿ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡಿ ಗ್ರಾಮವು ಇದ್ದರಡಿ ಕಂಡ ತಖ್ತೆಯಲ್ಲಿ ನಮೂದಿಸಿರುವ ಸ್ಥಳದಲ್ಲೂ ಆ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಗೆ 11 ಘಂಟೆಗೆ ಹರಾಜು ಪುರುವಾಗಿ ಉಳಿಕೆ ಯಾವದೂ ಇಲ್ಲದೆ ಗ್ರಾಮವು ಚಪ್ಪರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಒಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷನರವರು ತಮ್ಮ ಯಿಚ್ಛಾನುರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವುದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನು ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರರು ಹರಾಜು ಕಾಲದಲ್ಲಿ ಕ್ರಯದ ಮೊಬಲಗು ಪೈಕಿ ಶೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗು ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯಿತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ಮರಳಿ ಹರಾಜ್ ಹಾಕಲ್ಪಡುವವು.

5. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲೀ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜ್ ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಸಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜು ವುವುಕೂಫ ಮಾಡಲ್ಪಡತಕ್ಕದ್ದು.

6. ಡೆಪ್ಯುಟಿ ಕಮ್ಮಿಷ್ಟರ್ರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಖಾಯಮಾದ್ದಾಗಿರುವದಿಲ್ಲವು.

7. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜನ್ನು ಡೆಪ್ಯುಟಿ ಕಮಿಷನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಫರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರವರಿಂದ ರುಜು ಮೊಹರು ಮಾಡೋಸಾದ ಒಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಸೀಲ್‌ನಲ್ಲಾಗಲಿ ಅಂದಾಜು ಬೀಜವರಿ ವಿಷಯದಲ್ಲಾಗಲಿ ಇರುವ ಗಲ್ಲತ್ತುಗಳಿಗೆ ಸರಕಾರವರು ಜವಾಬುದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

8. ಪರಂತು, ಸದರೀ ಹರಾಜಿನಿಂದ ನಿಕ್ಕಾಸಪಟ್ಟಂತೆ ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿನಗಳೊಳಗಾಗಿ ಡೆಪ್ಯುಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂತಾ ಅಪ್ಪೀಲಿನಲ್ಲಿ ಆಗುವ ಆಜ್ಞೆರು ಹುಕುಮಿಗೆ ಸದರೀ ಕ್ರಯವು ಒಳಪಟ್ಟು ಇರುತ್ತೆ.

ಡಿಸ್ಟ್ರಿಕ್ಟು	ತಾಲ್ಲೂಕು	ಜೋಡಿ	ಜೋಡಿ ನಂಬರು	ಜೋಡಿದಾರರ ಹೆಸರು.	ಅಂದಾಜು ಬೀಜವರಿ.	ಅಂದಾಜು ಹುಟ್ಟುವಳಿ	ಸರಕಾರಕ್ಕೆ ಕೊಡಬೇಕಾದ ಕ್ರಯದ ಮೊಬಲಗು	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂತಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು
					ಎ. ಗು.	ರೂ. ಅ.	ರೂ.	ರೂ. ಆ. ಪೈ	
ಹಾಸನ	ಹಾಸನ	ಹಾಸನ ಕಸಬಾ	ಜೋಡಿ ಹಂದಿನಕೆರೆ	ಸಿಂಕಸುನಾರಣಪ್ಪು	ಖರಾಬು 1,194 4	18 12		639 4 9	ಕ್ರೋಧಿ 1904-05
					ಖುಷ್ಕಿ 1,037 32	926 4		1,099 5 9	ವಿಶ್ವಾವಸು 1905-06
					ತರಿ 311 9	1,105 12		1,099 5 9	ಪರಾಭವ 1906-07
					ಬಾಗಾಯತು 43 6	195 0		1,099 5 9	ಪ್ಲವಂಗ 1907-08
					ಜುಮ್ಲಾ 2,586 11	2,245 12	959	3,936 5 5	ಮತ್ತು ನೋಟೀಸ್ ಫೀ, ಹಿಂದಿನ ಬಾಕಿ ಮೇಲಿನ ಬಡ್ಡಿ ಸಹಾ.

1908ನೆ ಇಸವಿ ಫೆಬ್ರುವರಿ 17ನೆ ತಾರೀಖು ಸೋಮವಾರ ದಿವಸ 11 ಘಂಟೆ ಲಾಗಾಯಿತು ಹಾಸನ ತಾಲ್ಲೂಕು ಕಛೇರಿಯಲ್ಲಿ ಹಾಸನ ಡಿಸ್ಟ್ರಿಕ್ಟ್ ಟ್ರೆಜರಿ ಅಸಿಸ್ಟೆಂಟ್ ಕಮಿಷ್ಟರವರು ಯಾ ಡೆಪ್ಯುಟಿ ಕಮಿಷ್ಟರವರಿಂದ ನೇಮಕವಾಗುವ ಇತರ ಆಫೀಸರು ಹರಾಜನ್ನು ನಡಿಸುತ್ತಾರೆ.

ನರಸಿಂಗರಾವ್ ಪೂರ್ಣಯ್ಯ,
ಫಾರ್ ಡೆಪ್ಯುಟಿ ಕಮ್ಮಿಷನರ್.